## ಬೆಂಗಳೂರು ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್ ನಿ.,

ನಂ.6, 'ಲಕ್ಷ್ಮಿಸದನ', 5ನೇ ಮುಖ್ಯರಸ್ತೆ, ಚಾಮರಾಜಪೇಟೆ, ಬೆಂಗಳೂರು-18.

**(Phone No.:080-29505301/29500301, E-mail – bdbrdccb@gmail.com)**

**ನಂ.ಬಿಡಿಸಿಸಿಬಿ:ಪ್ರ.ಕ.ಆಸಿ:ನೇಮಕಾತಿ: 1941 :2025-26** **ದಿನಾಂಕ:17.09.2025**

## ಪ್ರಕಟಣೆ

ಬೆಂಗಳೂರು ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್ ನಿ., ಬೆಂಗಳೂರು, ಈ ಬ್ಯಾಂಕಿನಿಂದ ಈಗಾಗಲೇ ದಿನಾಂಕ:14.08.2025 ರಂದು ಹೊರಡಿಸಿದ್ದ ಪ್ರಕಟಣೆ ಮುಂದುವರೆದು ಬ್ಯಾಂಕು ಪರಿಷ್ಕೃತ ಅವಶ್ಯಕತೆಗಳಗನುಗುಣವಾಗಿ **ಮಧ್ಯಮ ಆಡಳಿತ ವರ್ಗ-I ಉಪ ಪ್ರಧಾನ ವ್ಯವಸ್ಥಾಪಕರು : (Chief Information Security Officer) (CISO)** ಮತ್ತು **ಕಿರಿಯ ಆಡಳಿತ ವರ್ಗ-I ಶಾಖಾ ವ್ಯವಸ್ಥಾಪಕರು (Information Techonolgy Manager) (IT)** ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲು ಮರು ನೇಮಕಾತಿ ಪ್ರಕಟಣೆಯನ್ನು ಹೊರಡಿಸಿದೆ. ಹೆಚ್ಚಿನ ಮಾಹಿತಿಗಾಗಿ ಆಸಕ್ತ ಅಭ್ಯರ್ಥಿಗಳು ಬ್ಯಾಂಕಿನ ಅಧಿಕೃತ ವೆಬ್‌ಸೈಟ್ www.bengalurudccbank.com ನ್ನು ಸಂಪರ್ಕಿಸಬಹುದು. ಅರ್ಜಿಗಳನ್ನು ಖುದ್ದಾಗಿ/ಅಂಚೆ/ಕೊರಿಯರ್ ಇತ್ಯಾದಿಗಳ ಮೂಲಕ ಕಳುಹಿಸಲು ಅವಕಾಶವಿರುವುದಿಲ್ಲ.

ನೇಮಕಾತಿ ಮಾಡಲು ಉದ್ದೇಶಿಸಿರುವ ಎರಡು (02) ಹುದ್ದೆಗಳನ್ನು ಸರ್ಕಾರಿ ಆದೇಶದ ಪ್ರಕಾರ ಕೆಳಕಂಡಂತೆ ವರ್ಗೀಕರಿಸಿ ಮೀಸಲಿರಿಸಲಾಗಿದೆ.

**A) ಹುದ್ದೆಯ ಹೆಸರು: (ಮಧ್ಯಮ ಆಡಳಿತ ವರ್ಗ-I) ಉಪ ಪ್ರಧಾನ ವ್ಯವಸ್ಥಾಪಕರು : (Chief Information Security Officer) (CISO): ಮಾಹಿತಿ ತಂತ್ರಜ್ಞಾನ ವಿಭಾಗ: ಒಟ್ಟು 1 (ಒಂದು) ಹುದ್ದೆ.**

| ವರ್ಗ | ಸಾಮಾನ್ಯ ಅಭ್ಯರ್ಥಿ (ಇತರೆ) | ಮಹಿಳಾ ಅಭ್ಯರ್ಥಿ | ಗ್ರಾಮೀಣ ಅಭ್ಯರ್ಥಿ | ಅಂಗವಿಕಲ ಅಭ್ಯರ್ಥಿ | ಮಾಜಿ ಸೈನಿಕ ಅಭ್ಯರ್ಥಿ | ಕನ್ನಡ ಮಾಧ್ಯಮ ಅಭ್ಯರ್ಥಿ | ಯೋಜನಾ ನಿರಾಶ್ರಿತ ಅಭ್ಯರ್ಥಿ | ತೃತೀಯ ಲಿಂಗ | ಒಟ್ಟು ಹುದ್ದೆಗಳ ೨ |
|---|---|---|---|---|---|---|---|---|---|
| ಸಾಮಾನ್ಯ | 1 | – | – | – | – | – | – | – | 1 |
| **ಒಟ್ಟು** | **1** | – | – | – | – | – | – | – | **1** |

**B) ಹುದ್ದೆಯ ಹೆಸರು: (ಕಿರಿಯ ಆಡಳಿತ ವರ್ಗ-I) ಶಾಖಾ ವ್ಯವಸ್ಥಾಪಕರು (Information Techonolgy Manager) (IT): ಮಾಹಿತಿ ತಂತ್ರಜ್ಞಾನ ವಿಭಾಗ: ಒಟ್ಟು 1 (ಒಂದು) ಹುದ್ದೆ.**

| ವರ್ಗ | ಸಾಮಾನ್ಯ ಅಭ್ಯರ್ಥಿ (ಇತರೆ) | ಮಹಿಳಾ ಅಭ್ಯರ್ಥಿ | ಗ್ರಾಮೀಣ ಅಭ್ಯರ್ಥಿ | ಅಂಗವಿಕಲ ಅಭ್ಯರ್ಥಿ | ಮಾಜಿ ಸೈನಿಕ ಅಭ್ಯರ್ಥಿ | ಕನ್ನಡ ಮಾಧ್ಯಮ ಅಭ್ಯರ್ಥಿ | ಯೋಜನಾ ನಿರಾಶ್ರಿತ ಅಭ್ಯರ್ಥಿ | ತೃತೀಯ ಲಿಂಗ | ಒಟ್ಟು ಹುದ್ದೆಗಳು |
|---|---|---|---|---|---|---|---|---|---|
| ಸಾಮಾನ್ಯ | 1 | – | – | – | – | – | – | – | 1 |
| ಒಟ್ಟು | **1** | – | – | – | – | – | – | – | **1** |

### ವಿಶೇಷ ಸೂಚನೆ :

**ಈ ಮೇಲ್ಕಂಡ ಎರಡು (2) ಹುದ್ದೆಗಳು ವೃಂದಬಲದಲ್ಲಿ ಪ್ರತ್ಯೇಕ ಒಂದೊಂದೆ ತಾಂತ್ರಿಕ ಹುದ್ದೆಗಳಿರುವುದರಿಂದ, ಈ ಹುದ್ದೆಗಳ ನೇಮಕಾತಿಯಲ್ಲಿ ಮೀಸಲಾತಿ ಅನ್ವಯಿಸದೇ ಸಾಮಾನ್ಯ ಮೀಸಲಾತಿಯಡಿಯಲ್ಲಿ ಎಲ್ಲಾ ವರ್ಗಗಳ ಅರ್ಹ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದು.**

**ಟಿಪ್ಪಣಿ:**

1. ಈ ನೇಮಕಾತಿ ಪ್ರಕಟಣೆಯಲ್ಲಿ ತಿಳಿಸಿರುವ ಹುದ್ದೆಗಳು ಅನಿವಾರ್ಯ ಸಂದರ್ಭದಲ್ಲಿ ಬದಲಾವಣೆಯಾಗಬಹುದಾಗಿದ್ದು, ನೇಮಕಾತಿ ಪ್ರಾಧಿಕಾರವು ಬದಲಾವಣೆ ಮಾಡುವ ಮತ್ತು ರದ್ದುಪಡಿಸುವ ಅಧಿಕಾರವನ್ನು ಕಾಯ್ದಿರಿಸಿಕೊಂಡಿದೆ.
2. ಅಭ್ಯರ್ಥಿಗಳು ಒಂದು ಹುದ್ದೆಗೆ ಒಂದೇ ಅರ್ಜಿ ಸಲ್ಲಿಸತಕ್ಕದ್ದು, ಒಂದಕ್ಕಿಂತ ಹೆಚ್ಚು ಅರ್ಜಿಗಳನ್ನು ಸಲ್ಲಿಸಿದ್ದಲ್ಲಿ, ಅರ್ಹತೆ ಪಡೆದ ಅರ್ಜಿಯನ್ನು ಮಾತ್ರ ಪರಿಗಣಿಸಲಾಗುವುದು. ಅಭ್ಯರ್ಥಿಗಳು ಒಂದಕ್ಕಿಂತ ಹೆಚ್ಚಿನ ಹುದ್ದೆಗಳಿಗೆ ಅರ್ಜಿ ಸಲ್ಲಿಸಲು ಇಚ್ಛಿಸಿದಲ್ಲಿ, ಪ್ರತಿ ಹುದ್ದೆಗೆ ಪ್ರತ್ಯೇಕವಾಗಿ ಅರ್ಜಿ ಮತ್ತು ಶುಲ್ಕವನ್ನು ಪಾವತಿಸತಕ್ಕದ್ದು.
3. ಅರ್ಜಿಗಳನ್ನು ಆನ್-ಲೈನ್ (**ONLINE** – ಎಲೆಕ್ಟ್ರಾನಿಕ್ ಮಾರ್ಗ) ಮುಖಾಂತರ ಮಾತ್ರ ಸಲ್ಲಿಸತಕ್ಕದ್ದು. ಅರ್ಜಿಗಳನ್ನು ಖುದ್ದಾಗಿ ಅಥವಾ ಅಂಚೆ/ಕೊರಿಯರ್ ಮೂಲಕ ಪ್ರತ್ಯೇಕವಾಗಿ ಸಲ್ಲಿಸಲು ಅವಕಾಶವಿರುವುದಿಲ್ಲ.
4. ಅಭ್ಯರ್ಥಿಗಳು ಅರ್ಜಿಯನ್ನು **ONLINE** ನಲ್ಲಿ ನೀಡಿರುವ ಸೂಚನೆಗಳನ್ವಯ ಭರ್ತಿ ಮಾಡತಕ್ಕದ್ದು.
5. ಅಭ್ಯರ್ಥಿಗಳು ತಪ್ಪು/ಅಪೂರ್ಣ ಮಾಹಿತಿ ನೀಡಿ ಅರ್ಜಿ ಸಲ್ಲಿಸಿದ್ದಲ್ಲಿ ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

## 1. ವೇತನ ಶ್ರೇಣಿ:

- **ಹುದ್ದೆಯ ಹೆಸರು: (ಮಧ್ಯಮ ಆಡಳಿತ ವರ್ಗ-I) ಉಪ ಪ್ರಧಾನ ವ್ಯವಸ್ಥಾಪಕರು (CISO): ಮಾಹಿತಿ ತಂತ್ರಜ್ಞಾನ ವಿಭಾಗ: ಒಟ್ಟು 1 (ಒಂದು) ಹುದ್ದೆ.**
  **ವೇತನ ಶ್ರೇಣಿ** : 69250-1650-74200-1900-85600-2300-99400-2700-115600-3100-134200
- **ಹುದ್ದೆಯ ಹೆಸರು: (ಕಿರಿಯ ಆಡಳಿತ ವರ್ಗ-I) ಶಾಖಾ ವ್ಯವಸ್ಥಾಪಕರು (IT Manager)** : **ಮಾಹಿತಿ ತಂತ್ರಜ್ಞಾನ ವಿಭಾಗ: ಒಟ್ಟು 1 (ಒಂದು) ಹುದ್ದೆ.**
  **ವೇತನ ಶ್ರೇಣಿ** : 65950-1650-74200-1900-85600-2300-99400-2700-115600-3100-124900.

**(ಬ್ಯಾಂಕಿಂಗ್ ಕ್ಷೇತ್ರದಲ್ಲಿ ವಿಶೇಷ ಜ್ಞಾನ, ಪರಿಣಿತಿ ಮತ್ತು ಅನುಭವ ಹೊಂದಿದ್ದಲ್ಲಿ ವೇತನ ಹೆಚ್ಚಿಸುವ ಅಧಿಕಾರ ಆಡಳಿತ ಮಂಡಲಿಗೆ ನಿಹಿತವಾಗಿರುತ್ತದೆ. )**

## 2. ಶುಲ್ಕ:

ಯಾವುದೇ ವರ್ಗದಡಿಯಲ್ಲಿ ಅರ್ಜಿ ಸಲ್ಲಿಸುವ ಎಲ್ಲಾ ಅಭ್ಯರ್ಥಿಗಳಿಗೆ ರೂ.2000/-ಗಳ ಅರ್ಜಿ ಶುಲ್ಕ ಮತ್ತು ಸೇವಾ ಶುಲ್ಕ ಅನ್ವಯಿಸುತ್ತದೆ.

ಅರ್ಜಿ ಶುಲ್ಕವನ್ನು Payment using Net Banking, Credit Card, Debit Card, UPI ಮುಖಾಂತರ ಅರ್ಜಿ ಶುಲ್ಕ ಮತ್ತು Payment Gateway ಚಾರ್ಜಸ್‌ನ್ನು ಪಾವತಿ ಮಾಡತಕ್ಕದ್ದು. ಶುಲ್ಕವನ್ನು ಪಾವತಿಸಲು ನಿಗಧಿಪಡಿಸಿದ **ಕೊನೆಯ ದಿನಾಂಕ:02.10.2025 ರ ರಾತ್ರಿ 11.59 ಗಂಟೆಯೊಳಗಾಗಿ ಪಾವತಿಸತಕ್ಕದ್ದು**. ಇದನ್ನು ಹೊರತುಪಡಿಸಿ ಡಿ.ಡಿ., ಪೋಸ್ಟಲ್ ಆರ್ಡ್‌ರ್, ಮನಿ ಆರ್ಡರ್ ಇವುಗಳನ್ನು ಸ್ವೀಕರಿಸಲಾಗುವುದಿಲ್ಲ ಹಾಗೂ ಅರ್ಜಿ ಶುಲ್ಕವನ್ನು ನಿಗಧಿಪಡಿಸಿದ ದಿನಾಂಕ, ಸಮಯದೊಳಗಾಗಿ ಸಲ್ಲಿಸದೇ ಇರುವಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

- **ಅಭ್ಯರ್ಥಿಗಳು ONLINE ಮೂಲಕ ಅರ್ಜಿ ಭರ್ತಿ ಮಾಡುವ ಮೊದಲು ಕೆಳಕಂಡ ಸೂಚನೆಗಳನ್ನು ಕಡ್ಡಾಯವಾಗಿ ತಿಳಿದುಕೊಳ್ಳತಕ್ಕದ್ದು:**

**ಹಂತ 1**: ಅಭ್ಯರ್ಥಿಗಳು ಬ್ಯಾಂಕಿನ ಅಧಿಕೃತ ವೆಬ್‌ಸೈಟ್ **www.bengalurudccbank.com** ಅನ್ನು ತೆರೆದ ಕೂಡಲೆ ಕಂಪ್ಯೂಟರ್ ಪರದೆಯ ಮೇಲೆ **'BDCC BANK RECRUITMENT 2025** ಎಂದು ಮೂಡುತ್ತದೆ. ಆನ್‌ಲೈನ್ ಅರ್ಜಿಯನ್ನು ಭರ್ತಿ ಮಾಡುವ ಪೂರ್ವದಲ್ಲಿ ಅಧಿಸೂಚನೆ ಮತ್ತು ಸೂಚನೆಗಳನ್ನು ಕಡ್ಡಾಯವಾಗಿ ಓದತಕ್ಕದ್ದು ಮತ್ತು ಅಂತಿಮವಾಗಿ ನಿಯಮ ಮತ್ತು ಷರತ್ತುಗಳನ್ನು ಕೆಳಗಿನ ಚೆಕ್‌ಬಾಕ್ಸ್ ಅನ್ನು ಒತ್ತುವ ಮೂಲಕ ಒಪ್ಪಿಕೊಳ್ಳತಕ್ಕದ್ದು ಮತ್ತು **Open Application** ಗುಂಡಿಯನ್ನು ಒತ್ತಿ ಮುಂದುವರಿಯಿರಿ.


**ಹಂತ 2**:-ಸಂಬಂಧಪಟ್ಟ ಹುದ್ದೆಯನ್ನು ಆಯ್ಕೆ ಮಾಡಿ **Apply** ಗುಂಡಿಯನ್ನು ಒತ್ತಿ ಅರ್ಜಿಯನ್ನು ಭರ್ತಿಮಾಡತಕ್ಕದ್ದು. ಅರ್ಜಿಯನ್ನು ಭರ್ತಿ ಮಾಡಿದ ನಂತರ ನಮೂದಿಸಿದ ವಿವರಗಳನ್ನು ಮತ್ತೊಮ್ಮೆ ಕೂಲಂಕುಷವಾಗಿ ಪರಿಶೀಲಸಿಕೊಂಡು, ಎಲ್ಲಾ ವಿವರಗಳು ಸರಿಯಾಗಿರುತ್ತವೆಯೆಂದು ಖಚಿತ ಪಡಿಸಿಕೊಂಡ ನಂತರ **Preview** ಗುಂಡಿಯನ್ನು ಒತ್ತಿ ಮುಂದುವರಿಯಿರಿ.

**ಹಂತ 3**:-ನಿಮ್ಮ ಅರ್ಜಿಯ ಯಾವುದೇ ವಿವರಗಳ ಬದಲಾವಣೆ ಅಗತ್ಯವಿದ್ದರೆ ಪೂರ್ವದರ್ಶನ ಪುಟದಲ್ಲಿ **Edit** ಗುಂಡಿಯನ್ನು ಒತ್ತಿ, ನಿಮ್ಮ ಅರ್ಜಿಯಲ್ಲಿನ ವಿವರಗಳು ಸರಿ ಇರುವುದನ್ನು ಖಚಿತಪಡಿಸಿಕೊಂಡು, ನಿಮ್ಮ ಸಹಿಯೊಂದಿಗಿನ ಪಾಸ್ ಪೋರ್ಟ್ ಗಾತ್ರದ ಸ್ಕ್ಯಾನ್ ಮಾಡಿದ ಭಾವಚಿತ್ರವನ್ನು ಅಪ್‌ಲೋಡ್ ಮಾಡುವ ಬಗ್ಗೆ **Next** ಗುಂಡಿಯನ್ನು ಒತ್ತಿ.

**Note :-** ಈ ಹಂತದಲ್ಲಿ ಅಭ್ಯರ್ಥಿಯು ನೊಂದಾಯಿಸಿದ ಇಮೇಲ್ ವಿಳಾಸಕ್ಕೆ ಒಂದು ಸ್ವಯಂಚಾಲಿತ ಇಮೇಲ್ ಮೂಲಕ ಅವರ **Application ID** ಮತ್ತು **Password** ಅನ್ನು ಕಳುಹಿಸಲಾಗುವುದು. ಅಭ್ಯರ್ಥಿಯು **Edit Application** ಗುಂಡಿಯನ್ನು ಒತ್ತಿ, ಅವರ **Application ID** ಮತ್ತು **Password** ಅನ್ನು ಬಳಸಿ ತಮ್ಮ ವಿವರಗಳನ್ನು ಅಪ್‌ಲೋಡ್ ಮಾಡಬಹುದು ಅಥವಾ ಅಪ್‌ಲೋಡ್ ಮಾಡಿದ ಮಾಹಿತಿಯನ್ನು ಬದಲಾಯಿಸಬಹುದು.

**ಹಂತ 4**:-ನೀವು ಸಹಿಯೊಂದಿಗಿನ ಸ್ಕ್ಯಾನ್ ಮಾಡಿದ ಪಾಸ್ ಪೋರ್ಟ್ ಗಾತ್ರದ ಭಾವಚಿತ್ರವನ್ನು ಆಯ್ಕೆ ಮಾಡುವ ಬಗ್ಗೆ **Browse** ಗುಂಡಿಯನ್ನು ಒತ್ತಿ ಮತ್ತು ನಿಮ್ಮ ಸಹಿಯೊಂದಿಗಿನ ಭಾವಚಿತ್ರವನ್ನು ಪೂರ್ವದರ್ಶನ ಮಾಡಲು **Submit** ಗುಂಡಿಯನ್ನು ಒತ್ತಿ. ಒಂದು ವೇಳೆ ತಪ್ಪಾದ ಭಾವಚಿತ್ರವನ್ನು ಅಪ್‌ಲೋಡ್ ಮಾಡಿದ್ದಲ್ಲಿ ಮೇಲಿನ ಕ್ರಮವನ್ನು ಪುನರಾವರ್ತಿಸಿ ಅಥವಾ ಮುಂದಿನ ಪುಟದ ಬಗ್ಗೆ **Next** ಗುಂಡಿಯನ್ನು ಒತ್ತಿ. ಅಭ್ಯರ್ಥಿಯು ಈ ಹಂತದಲ್ಲಿ **Next** ಗುಂಡಿಯನ್ನು ಒತ್ತಿದರೆ ತಮ್ಮ ಅರ್ಜಿಯಲ್ಲಿನ ಯಾವುದೇ ವಿವರವನ್ನು ಬದಲಾಯಿಸಲು ಸಾಧ್ಯವಿರುವುದಿಲ್ಲ.

ಅರ್ಜಿಯನ್ನು ಭರ್ತಿ ಮಾಡುವ ಮುನ್ನ ಅಭ್ಯರ್ಥಿಯು ತನ್ನ ಇತ್ತೀಚಿನ ಭಾವಚಿತ್ರವನ್ನು ಖಾಲಿ ಬಿಳಿ ಕಾಗದದ ಮೇಲೆ ಇರಿಸಿ, ಕಪ್ಪು ನಕ್ಷೆ/ಮಾರ್ಕರ್ ಪೆನ್ನಿನಿಂದ ಸರಿಯಾಗಿ ಭಾವಚಿತ್ರದ ಕೆಳಗೆ ಸಹಿ ಮಾಡಿರುವುದನ್ನು ಮತ್ತು ಅಂಕಣದೊಳಗೆ ಇರುವುದನ್ನು ಖಚಿತಪಡಿಸಿಕೊಳ್ಳಿ. ಯಾವುದೇ ಕಾರಣಕ್ಕೂ ಭಾವಚಿತ್ರದ ಮೇಲೆ ಸಹಿ ಮಾಡಬಾರದು.

| | |
|---|---|
| ಕಡತ ಗಾತ್ರ<100ಕೆ.ಬಿ | ಪಾಸ್ ಪೋರ್ಟ್ ಭಾವಚಿತ್ರ ಮತ್ತು ಸಹಿ ಅಳತೆ |
| ಡಿಪಿಐ ಸೆಟ್ಟಿಂಗ್ =100 ಡಿಪಿಐ |   |
| ಆಕೃತಿ ಪ್ರಮಾಣ =100% | |
| ಬಣ್ಣ | |
| ಜೆ ಪಿ ಜಿ/ಜೆ ಪಿ ಇ ಜಿ | |

**ಪಾಸ್‌ಪೋರ್ಟ್ ಭಾವಚಿತ್ರದ ಅಳತೆಗಳು**: 45 ಎಂ.ಎಂ. (ಉದ್ದ) **x** 35 ಎಂ.ಎಂ. (ಅಗಲ)
**ಸಹಿ ಅಳತೆ**: 20 ಎಂ.ಎಂ. (ಉದ್ದ) **x** 35 ಎಂ.ಎಂ. (ಅಗಲ)

**Note :–**ಅಭ್ಯರ್ಥಿಯು **Photo Upload** ಗುಂಡಿಯನ್ನು ಒತ್ತಿ, ಅವರ **Application** ID ಮತ್ತು P**assword** ಅನ್ನು ಬಳಸಿ ತಮ್ಮ ಸಹಿಯೊಂದಿಗಿನ ಭಾವಚಿತ್ರವನ್ನು ಅಪ್‌ಲೋಡ್ ಮಾಡಬಹುದು ಅಥವಾ ತಪ್ಪಾದಲ್ಲಿ ಅದನ್ನು ಬದಲಾಯಿಸಬಹುದು. ಒಂದು ವೇಳೆ ಅಭ್ಯರ್ಥಿಯು ತಮ್ಮ ಭಾವಚಿತ್ರ ಮತ್ತು ಸಹಿಯನ್ನು ಅಪ್‌ಲೋಡ್ ಮಾಡದಿದ್ದರೆ ಅವರ ಅರ್ಜಿಯನ್ನು ಪರಿಗಣಿಸಲಾಗುವುದಿಲ್ಲ.

**ಹಂತ 5**:–ಅರ್ಜಿಯ ಮುದ್ರಣವನ್ನು ಪಡೆಯಲು **Print Application** ಗುಂಡಿಯನ್ನು ಒತ್ತಿ, ಅನಂತರವೇ **Application Preview** ಮೂಡಲಿದ್ದು, ಅಭ್ಯರ್ಥಿಗಳು ಅರ್ಜಿಯ ಪ್ರತಿಯನ್ನು ಕಡ್ಡಾಯವಾಗಿ **Download** ಮಾಡಿಕೊಳ್ಳತಕ್ಕದ್ದು. **BBR & RDCC BANK** ಅಪೇಕ್ಷಿಸಿದಾಗ ಈ ಪ್ರತಿಯನ್ನು ಹಾಜರುಪಡಿಸಬೇಕು.

**ಹಂತ 6**:–ನಂತರ ಅರ್ಜಿ ಶುಲ್ಕವನ್ನು ಪಾವತಿಸುವುದಕ್ಕೆ **Post Office Challan** ಗುಂಡಿಯನ್ನು ಒತ್ತಿ, **challan** ಪ್ರತಿಯನ್ನು **Download** ಮಾಡಿಕೊಂಡು ಕರ್ನಾಟಕ ರಾಜ್ಯದಲ್ಲಿನ ಯಾವುದೇ ಇ–ಪಾವತಿ ಅಂಚೆ ಕಛೇರಿಗೆ ಹೋಗಿ, **[ನಿಗದಿತ ಅರ್ಜಿ ಶುಲ್ಕ + ಅನ್ವಯಿಸುವ ಸೇವಾ ತೆರಿಗೆಯನ್ನು]** ಪಾವತಿ ಮಾಡಿ. ಅಂತಿಮವಾಗಿ **ಪೋಸ್ಟ್ ಆಫೀಸ್ ಸ್ಟಿಕ್ಕರ್** ಅನ್ನು ನಿಮ್ಮ **challan** ಪ್ರತಿಯ ಮೇಲೆ ಅಂಟಿಸುವುದರಿಂದ ನಿಮ್ಮ ಶುಲ್ಕ ಪಾವತಿಯನ್ನು ದೃಢಪಡಿಸಲಾಗುತ್ತದೆ.

## Note :-

1. ಶುಲ್ಕವನ್ನು ಪಾವತಿಸಲು ನಿಗದಿಪಡಿಸಿದ ಕೊನೆಯ ದಿನಾಂಕ:02.10.2025 ರ ನಂತರ ಶುಲ್ಕವನ್ನು ಸಂದಾಯ ಮಾಡಲು ಅವಕಾಶವಿರುವುದಿಲ್ಲ. ಡಿ.ಡಿ., ಪೋಸ್ಟಲ್ ಆರ್ಡರ್, ಮನಿ ಆರ್ಡರ್ ಇವುಗಳನ್ನು ಸ್ವೀಕರಿಸಲಾಗುವುದಿಲ್ಲ. ಶುಲ್ಕ ಸಂದಾಯ ಮಾಡದ ಅರ್ಜಿಗಳನ್ನು ಪರಿಗಣಿಸುವುದಿಲ್ಲ.

2. ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗಧಿಪಡಿಸಿದ ಕೊನೆಯ ದಿನಾಂಕದವರೆಗೂ ವಿಳಂಬ ಮಾಡದೆ ಮುಂಚಿತವಾಗಿ ಅರ್ಜಿಗಳನ್ನು ಸಲ್ಲಿಸತಕ್ಕದ್ದು. ಒಮ್ಮೆ ಶುಲ್ಕವನ್ನು ಪಾವತಿಸಿದ ನಂತರ ಅದನ್ನು ಯಾವುದೇ ಸಂದರ್ಭದಲ್ಲಿಯೂ ಹಿಂದಿರುಗಿಸಲಾಗುವುದಿಲ್ಲ. ಅಥವಾ ಅದನ್ನು ಇತರೆ ಯಾವುದೇ ಪರೀಕ್ಷೆ ಅಥವಾ ನೇಮಕಾತಿಗಳಿಗೆ ಹೊಂದಿಸಿಕೊಳ್ಳಲಾಗುವುದಿಲ್ಲ.

3. ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗಧಿಪಡಿಸಿದ ಕೊನೆಯ ದಿನಾಂಕದವರೆಗೂ ವಿಳಂಬ ಮಾಡದೆ ಮುಂಚಿತವಾಗಿ ಅರ್ಜಿಗಳನ್ನು ಸಲ್ಲಿಸತಕ್ಕದ್ದು.

4. ಅಭ್ಯರ್ಥಿಗಳು ತಮ್ಮ ಅರ್ಜಿ ಸ್ಥಿತಿಯನ್ನು ತಿಳಯಬೇಕಾದಲ್ಲಿ, ಅರ್ಜಿ ಸಲ್ಲಿಸಲು ನಿಗಧಿಪಡಿಸಿದ ಕೊನೆಯ ದಿನಾಂಕದ 7 ದಿನಗಳ ತರುವಾಯ ಬ್ಯಾಂಕಿನ ವೆಬ್‌ಸೈಟ್ www.bengalurudccbank.com ಲಿಂಕಿನಲ್ಲಿ ಮಾಹಿತಿಗಳನ್ನು ದಾಖಲಿಸಿ, ಅರ್ಜಿಯು ಸಿಂಧುವಾಗಿರುವ ಬಗ್ಗೆ ಮಾಹಿತಿಯನ್ನು ಪಡೆಯಬಹುದಾಗಿರುತ್ತದೆ. ತಮ್ಮ ಅರ್ಜಿಯ ಮಾಹಿತಿ ಬ್ಯಾಂಕಿನ ವೆಬ್‌ಸೈಟ್‌ನಲ್ಲಿ ದೊರೆಯದಿದ್ದಲ್ಲಿ, ನೀವು ಪಾವತಿಸಿದ ಶುಲ್ಕದ ವಿವರವುಳ್ಳ ಚಲನ್ ಪ್ರತಿಯೊಂದಿಗೆ Bangalore District Central Co Operative Bank Ltd., No.6, 'Lakshmi Sadana', 5th Main Road, Chamarajapet, Bangalore –560018 ಈ ವಿಳಾಸಕ್ಕೆ ಸಂಪರ್ಕಿಸಬಹುದು.

**ಅರ್ಜಿ ಸಲ್ಲಿಸಲು ಪ್ರಾರಂಭದ ದಿನಾಂಕ: ದಿನಾಂಕ : 17.09.2025**

**ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ : 02.10.2025**

**ಅರ್ಜಿ ಶುಲ್ಕವನ್ನು ಪಾವತಿಸಲು ಕೊನೆಯ ದಿನಾಂಕ: 02.10.2025 ( ರಾತ್ರಿ 11.59 ಗಂಟೆಯೊಳಗೆ)**

**ವಿಶೇಷ ಸೂಚನೆ:** **ONLINE** ಮೂಲಕ ಅರ್ಜಿಯನ್ನು ಭರ್ತಿ ಮಾಡುವ ಸಂದರ್ಭದಲ್ಲಿ ತಾಂತ್ರಿಕ ತೊಂದರೆ ಅಥವಾ ಸಮಸ್ಯೆ ಎದುರಾದಲ್ಲಿ ಸಹಾಯವಾಣಿ **(Help Line)** 9036072155 ಅನ್ನು ಬೆಳಗ್ಗೆ 10.00 ಗಂಟೆಯಿಂದ ಸಂಜೆ 6.00 ಗಂಟೆಯವರೆಗೆ ಸಂಪರ್ಕಿಸಿ ಅಗತ್ಯ ಮಾಹಿತಿ ಪಡೆದು ಅರ್ಜಿ ಸಲ್ಲಿಸಬಹುದು.

**A) ಹುದ್ದೆಯ ಹೆಸರು: (ಮಧ್ಯಮ ಆಡಳಿತ ವರ್ಗ–I) ಉಪ ಪ್ರಧಾನ ವ್ಯವಸ್ಥಾಪಕರು (CISO) ಹುದ್ದೆ.**

ಮಾನ್ಯತೆ ಪಡೆದ ಅಂಗೀಕೃತ ವಿಶ್ವವಿದ್ಯಾಲಯದಲ್ಲಿ M.C.A / M.Sc Computer Science / M.C.S / M.B.A with Systems specialization / B.E (Computer / IT) with Masters degree M.Tech / M.E / MBA **Certification required:** CISA / CISM / DISA ವಿದ್ಯಾರ್ಹತೆಯಲ್ಲಿ ತೇರ್ಗಡೆಯಾಗಿರಬೇಕು.

**Post Qualification Experience:**

A minimum experience of 5 years out of which at least 2 years with Software Company (with CMMI level 4 and above) / a major organization as a Security Information Officer in a centralized transaction processing environment. Experience in Banking is desirable. Candidate will be responsible for:

- Security office mission and mandate development
- Security office governance
- Security policy development and management
- Security training and awareness development
- Supervision and management of ethical hackers
- Framing of Cyber security policy framework and management

Coordination with Management, Head of IT Department and Regulatory Agencies for compliance of security for entire IT set up viz., at Data Centre, Head Office, Branches, Disaster Recovery site (DR-site) and delivery channels etc.

ಕನ್ನಡವನ್ನು ಓದುವ ಸಾಮರ್ಥ್ಯದ ಜೊತೆಗೆ ಕನ್ನಡದ ಜ್ಞಾನ, ಬರೆಯುವಿಕೆ, ಕನ್ನಡವನ್ನು ಸ್ಪಷ್ಟವಾಗಿ ಮಾತನಾಡಬೇಕು ಮತ್ತು ಅರ್ಥಮಾಡಿಕೊಳ್ಳಬೇಕು.

**B) ಹುದ್ದೆಯ ಹೆಸರು: (ಕಿರಿಯ ಆಡಳಿತ ವರ್ಗ–I) ಶಾಖಾ ವ್ಯವಸ್ಥಾಪಕರು (IT Manager) ಹುದ್ದೆ**.
ಮಾನ್ಯತೆ ಪಡೆದ ಅಂಗೀಕೃತ ವಿಶ್ವವಿದ್ಯಾಲಯದಲ್ಲಿ BE / B.Tech (Computer Science and Engineering / Information Science and Engineering / Electroncis and Telecommunication Engineering / related discipline) OR M.C.A / M.Sc Computer Science / M.C.S AND OR CA/M.Com with diploma in Computers of duration of minimum six months from reputed institution. Desirable: Certification such as CISA/CISM/CCNA. ವಿದ್ಯಾರ್ಹತೆಯಲ್ಲಿ ತೇರ್ಗಡೆಯಾಗಿರಬೇಕು.

**Post qualification experience :**
A minimum of 5 years of experience out of which 2 years with software company having core banking environment. Out of the total experience, candidate must have at least 3 years experience at a lead position as Assistant Manager (IT) or equivalent post. The candidate must possess experience in large-scale IT architecture implementation. Be a Technology thought leader with Software project management experience. Have exposure in handling IT Development initiatives or projects, related budjets, project management, quality of outcomes, managing outsourced IT Development, testing all solutions (developed in-house or outsourced) and handling Turnkey IT projects. Have background in DataBase Management, turning administration and maintenance of DataBase / monitoring tools / facility management. Have sound knowledge in Networks/ Systems/ applications/ technology. Have competence in handling all quality, risk and compliance management initiative within IT verticals such as performance or conformance metrics reports, dashboard, internal user feedback and analysis, monitoring IT projects.

**Desirable:** 1. Managed IT department of a bank or major organization ಕನ್ನಡವನ್ನು ಓದುವ ಸಾಮರ್ಥ್ಯದ ಜೊತೆಗೆ ಕನ್ನಡದ ಜ್ಞಾನ, ಬರೆಯುವಿಕೆ, ಕನ್ನಡವನ್ನು ಸ್ಪಷ್ಟವಾಗಿ ಮಾತನಾಡಬೇಕು ಮತ್ತು ಅರ್ಥಮಾಡಿಕೊಳ್ಳುವ ಅರ್ಹತೆ

## ೩. ವಯೋಮಿತಿ:
ಅರ್ಜಿಗಳನ್ನು ಭರ್ತಿ ಮಾಡಲು ನಿಗಧಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಗಳು ಕನಿಷ್ಠ ವಯೋಮಿತಿಯನ್ನು ಹೊಂದಿರಬೇಕು ಹಾಗೂ ನಿಗಧಿತ ಗರಿಷ್ಠ ವಯೋಮಿತಿಯನ್ನು ಮೀರಿರಬಾರದು ಎಂದು ಇದ್ದು, ಈ **ಹುದ್ದೆಗಳಿಗೆ ಕನಿಷ್ಠ ೫ ವರ್ಷಗಳ ಸೇವಾನುಭವ ನಿಗಧಿಪಡಿಸಿರುವುದರಿಂದ ಅರ್ಜಿ ಸಲ್ಲಿಸಲು ನಿಗಧಿಪಡಿಸಿರುವ ಗರಿಷ್ಠ ವಯೋಮಿತಿಯನ್ನು ಹೆಚ್ಚುವರಿಯಾಗಿ ೫ ವರ್ಷಗಳ ವಯೋಮಿತಿಗೆ ಸಡಿಲಗೊಳಸಲಾಗಿರುತ್ತದೆ. ವಯೋಮಿತಿ ಸಡಿಲತೆ ಸೌಲಭ್ಯ ಪಡೆಯುವ (ಸಾಮಾನ್ಯ ವರ್ಗದ ಅಭ್ಯರ್ಥಿಗಳನ್ನು ಹೊರತುಪಡಿಸಿ) ಅಭ್ಯರ್ಥಿಗಳು ಆಯಾ ವರ್ಗದ ಜಾತಿ ಪ್ರಮಾಣ ಪತ್ರಗಳನ್ನು ಅರ್ಜಿ ಸಲ್ಲಿಸುವ ಸಮಯದಲ್ಲಿ ಅಪ್‌ಲೋಡ್ ಮಾಡತಕ್ಕದ್ದು**.

| **ವರ್ಗೀಕರಣದ ವಿವರ** | **ಕನಿಷ್ಠ** | **ಗರಿಷ್ಠ** | **ಸೇವಾನುಭವವನ್ನು ಪರಿಗಣಿಸಿ ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ಸಡಿಲಿಕೆ ನೀಡಿರುವ ವಯೋಮಿತಿ** |
|---|---|---|---|
| ಸಾಮಾನ್ಯ ವರ್ಗ | ೧೮ | ೩೫ | ೪೦ |
| ೨ಎ, ೨ಬಿ, ೩ಎ, ೩ಬಿ | ೧೮ | ೩೮ | ೪೩ |
| ಪ.ಜಾ./ಪ.ಪಂ/ಪ್ರ–೧ | ೧೮ | ೪೦ | ೪೫ |

### 4. ಆಯ್ಕೆ ವಿಧಾನ:

(ಮಧ್ಯಮ ಆಡಳಿತ ವರ್ಗ–I) ಉಪ ಪ್ರಧಾನ ವ್ಯವಸ್ಥಾಪಕರು (Chief Information Security Officer) ಮತ್ತು (ಕಿರಿಯ ಆಡಳಿತ ವರ್ಗ–I) ಶಾಖಾ ವ್ಯವಸ್ಥಾಪಕರು (Information Techonolgy Manager) (IT): ಎರಡು ಹುದ್ದೆಗಳಿಗೆ Banking and Development in Cooperative Banking, Banking Technology and Emerging trends in Banking Technology, Cyber Security & Artificial Intelligence ವಿಷಯಗಳ ಮೇಲೆ ಲಿಖಿತ ಪರೀಕ್ಷೆಗಾಗಿ ೨೦೦ ಅಂಕಗಳನ್ನು ನಿಗಧಿಪಡಿಸಲಾಗಿದೆ.

ಲಿಖಿತ ಪರೀಕ್ಷೆಯಲ್ಲಿ ಪಡೆಯಲಾದ ಅಂಕಗಳ ಶೇಕಡಾವಾರು ಆಧಾರದ ಮೇಲೆ 1:5 ರ ಅನುಪಾತದಲ್ಲಿ ಅಭ್ಯರ್ಥಿಗಳನ್ನು ಸಂದರ್ಶನಕ್ಕೆ ಕರೆಯಲಾಗುವುದು. **(ಸದರಿ ಅನುಪಾತವನ್ನು ಹೆಚ್ಚಿಸುವ ಮತ್ತು ಕಡಿಮೆ ಮಾಡುವ ಅಧಿಕಾರ ನೇಮಕಾತಿ ಸಮಿತಿಗೆ ನಿಹಿತವಾಗಿರುತ್ತದೆ)**

**ಲಿಖಿತ ಪರೀಕ್ಷೆ ಹಾಗೂ ಸಂದರ್ಶನಕ್ಕೆ ಹಾಜರಾಗುವ ಅಭ್ಯರ್ಥಿಗಳು ತಮ್ಮ ಸ್ವಂತ ಖರ್ಚಿನಲ್ಲಿ ಹಾಜರಾಗತಕ್ಕದ್ದು. ಲಿಖಿತ ಪರೀಕ್ಷೆ ನಡೆಯುವ ಸ್ಥಳ, ದಿನಾಂಕ ಮತ್ತು ವೇಳೆ ಇವುಗಳ ವಿವರವನ್ನು ಪ್ರತ್ಯೇಕವಾಗಿ ತಿಳಿಸಲಾಗುವುದು**

### ೫. ಅರ್ಹತಾ ಷರತ್ತುಗಳು:

ಅ) ಭಾರತೀಯ ನಾಗರೀಕನಾಗಿರತಕ್ಕದ್ದು.

ಆ) ಒಬ್ಬ ಜೀವಂತ ಪತ್ನಿಗಿಂತ ಹೆಚ್ಚು ಮಂದಿ ಪತ್ನಿಯರನ್ನು ಹೊಂದಿರುವ ಪುರುಷ ಅಭ್ಯರ್ಥಿ ಮತ್ತು ಈಗಾಗಲೇ ಇನ್ನೊಬ್ಬ ಹೆಂಡತಿ ಇರುವ ವ್ಯಕ್ತಿಯನ್ನು ಮದುವೆಯಾಗಿರುವ ಮಹಿಳಾ ಅಭ್ಯರ್ಥಿಯು ಸರ್ಕಾರದಿಂದ ಪೂರ್ವಾನುಮತಿಯನ್ನು ಪಡೆಯದೇ ಇದ್ದಲ್ಲಿ, ನೇಮಕಾತಿಗೆ ಅರ್ಹರಾಗುವುದಿಲ್ಲ.

ಇ) ಅಭ್ಯರ್ಥಿಯು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತರಾಗಿರಬೇಕು ಮತ್ತು ಅವರ ನೇಮಕಾತಿಯು ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಸಂಭವ ಇರುವ ಯಾವುದೇ ದೈಹಿಕ ನ್ಯೂನ್ಯತೆಯಿಂದ ಮುಕ್ತರಾಗಿರಬೇಕು.

ಈ) ದೈಹಿಕವಾಗಿ ಅನರ್ಹರಾಗಿದ್ದಾರೆಂಬುದಾಗಿ ವೈದ್ಯಕೀಯ ಮಂಡಳಿಯ ವರದಿಯ ಮೇಲೆ ಅನರ್ಹರೆಂಬುದಾಗಿ ತಿರಸ್ಕರಿಸುವ ಪೂರ್ಣ ವಿವೇಚನೆಯನ್ನು ಬ್ಯಾಂಕು ಕಾಯ್ದಿರಿಸಿಕೊಂಡಿದೆ.

ನಿಗಧಿತ ಶೈಕ್ಷಣಿಕ ಅರ್ಹತೆಯ ಜೊತೆಗೆ ಈ ಮೇಲ್ಕಂಡ ಅರ್ಹತೆಗಳನ್ನು ಹೊಂದಿರುವ ಅಭ್ಯರ್ಥಿಗಳು ನೇಮಕಾತಿಗಾಗಿ ಅರ್ಜಿ ಸಲ್ಲಿಸಲು ಅರ್ಹತೆಯನ್ನು ಹೊಂದಿರುತ್ತಾರೆ.

### ೬. ಪ್ರಮುಖ ಸೂಚನೆಗಳು :

ಅಭ್ಯರ್ಥಿಯ ಇತ್ತೀಚಿನ ಪಾಸ್‌ಪೋರ್ಟ್ ಅಳತೆಯ ಭಾವಚಿತ್ರವನ್ನು ಒಂದು ಹಾಳೆಯ ಮೇಲಂಟಿಸಿ ಅದರ ಕೆಳಗೆ ಕಪ್ಪು ಶಾಹಿಯ ಸ್ಕೆಚ್/ ಮಾರ್ಕರ್ ಪೆನ್‌ಲ್ಲಿ ಸಹಿಯನ್ನು ಸ್ಕ್ಯಾನ್ ಮಾಡಿ ಅರ್ಜಿಗೆ UPLOAD ಮಾಡಬೇಕು. ಭಾವಚಿತ್ರ ಹಾಗೂ ಸಹಿಯನ್ನು UPLOAD ಮಾಡದ ಅರ್ಜಿಗಳು ತಿರಸ್ಕೃತಗೊಳ್ಳುತ್ತವೆ. ಈ ಕೆಳಕಂಡ ಪ್ರಮಾಣ ಪತ್ರಗಳನ್ನು ನಿಗದಿತ ನಮೂನೆಯಲ್ಲಿ ON LINE ಮೂಲಕ ಅರ್ಜಿ ಭರ್ತಿ ಮಾಡಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಸಂಬಂಧಪಟ್ಟ ಪ್ರಾಧಿಕಾರಿಗಳಿಂದ ಪಡೆದಿಟ್ಟುಕೊಂಡಿರಬೇಕು. (ವಿದ್ಯಾರ್ಹತೆಗೆ ಸಂಬಂಧಿಸಿದ ಪ್ರಮಾಣ ಪತ್ರ/ ಪಾಸಿಂಗ್ ಸರ್ಟಿಫಿಕೇಟನ್ನು ಮಾತ್ರ UPLOAD ಮಾಡಬೇಕು) ಹಾಗೂ ಮೂಲ ದಾಖಲಾತಿಗಳ ಪರಿಶೀಲನೆಗೆ ಅರ್ಹರಾದಾಗ ಸಂದರ್ಶನ ಸಮಯದಲ್ಲಿ ಅದೇ ಮೀಸಲಾತಿ ಪ್ರಮಾಣ ಪತ್ರ ಹಾಗೂ ಇತರೇ ಪ್ರಮಾಣ ಪತ್ರಗಳ ಮೂಲ ಪ್ರತಿಯನ್ನು ಪರಿಶೀಲನೆಗೆ ಹಾಜರುಪಡಿಸಬೇಕು.

ಈ ಹುದ್ದೆಗಳಿಗೆ ಕನಿಷ್ಠ 5 ವರ್ಷಗಳ ಸೇವಾನುಭವ ನಿಗಧಿಪಡಿಸಿರುವುದರಿಂದ ಅರ್ಜಿ ಸಲ್ಲಿಸಲು ನಿಗಧಿಪಡಿಸಿರುವ ಗರಿಷ್ಠ ವಯೋಮಿತಿಯನ್ನು ಹೆಚ್ಚುವರಿಯಾಗಿ 5 ವರ್ಷಗಳ ವಯೋಮಿತಿಗೆ ಸಡಿಲಗೊಳಸಲಾಗಿರುತ್ತದೆ. ವಯೋಮಿತಿ ಸಡಿಲತೆ ಸೌಲಭ್ಯ ಪಡೆಯುವ (ಸಾಮಾನ್ಯ ವರ್ಗದ ಅಭ್ಯರ್ಥಿಗಳನ್ನು ಹೊರತುಪಡಿಸಿ) ಅಭ್ಯರ್ಥಿಗಳು ಆಯಾ ವರ್ಗದ ಜಾತಿ ಪ್ರಮಾಣ ಪತ್ರಗಳನ್ನು ಅರ್ಜಿ ಸಲ್ಲಿಸುವ ಸಮಯದಲ್ಲಿ ಅಪ್‌ಲೋಡ್ ಮಾಡತಕ್ಕದ್ದು ಹಾಗೂ ಸಂದರ್ಶನ ವೇಳೆಯಲ್ಲಿ ಹಾಜರುಪಡಿಸತಕ್ಕದ್ದು.

1) ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ ಹುದ್ದೆಗಳಿಗೆ ನಿಗಧಿಪಡಿಸಲಾದ ವಿದ್ಯಾರ್ಹತೆಯ ಎಲ್ಲಾ ವರ್ಷಗಳ/ಸೆಮಿಸ್ಟರ್‌ಗಳ ಅಂಕಪಟ್ಟಿಗಳು ಅಥವಾ ಘಟಿಕೋತ್ಸವದ ಪ್ರಮಾಣ ಪತ್ರ.

2) ಜನ್ಮ ದಿನಾಂಕವನ್ನು ನಮೂದಿಸಿರುವ ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯ ಪ್ರಮಾಣ ಪತ್ರ / ಶಾಲೆಯ ವರ್ಗಾವಣೆ ಪ್ರಮಾಣ ಪತ್ರ / ಜನನ ದಿನಾಂಕವನ್ನು ತೋರಿಸುವ ಸಂಚಿತ ದಾಖಲೆಯ ಉದ್ಧೃತ ಭಾಗ.

3) ನಿಗಧಿಪಡಿಸಿದ ವಿದ್ಯಾರ್ಹತೆಯ ಅಂಕಪಟ್ಟಿ ಮತ್ತು ಇತರೆ ಯಾವುದಾದರೂ ಅರ್ಹತಾ ದಾಖಲಾತಿ ಜೆರಾಕ್ಸ್ ಪ್ರತಿಗಳನ್ನು ಪತ್ರಾಂಕಿತ (ಗೆಜೆಟೆಡ್ ಅಧಿಕಾರಿ) ಅಧಿಕಾರಿಗಳಿಂದ ದೃಢೀಕರಿಸಿ, ಮೂಲ ದಾಖಲಾತಿಗಳೊಂದಿಗೆ ಸಂದರ್ಶನ/ಪರಿಶೀಲನೆ ವೇಳೆಯಲ್ಲಿ ಹಾಜರುಪಡಿಸತಕ್ಕದ್ದು.

4) ಅಭ್ಯರ್ಥಿಯ ಹೆಸರು ಅಂತಿಮ ಆಯ್ಕೆ ಪಟ್ಟಿಯಲ್ಲಿ ಸೇರ್ಪಡೆಯಾಗಿದೆ ಎಂಬುದರ ಆಧಾರದ ಮೇಲೆ ಅಭ್ಯರ್ಥಿಗೆ ನೇಮಕಾತಿಯ ಹಕ್ಕು ದೊರೆಯುವುದಿಲ್ಲ.

5) ಯಾವುದೇ ಸಂದರ್ಭದಲ್ಲಿ, ಯಾವುದೇ ಕಾರಣವನ್ನು ನೀಡದೇ ನೇಮಕಾತಿ ಪ್ರಕ್ರಿಯೆಯನ್ನು ರದ್ದುಗೊಳಿಸುವ, ತಡೆಹಿಡಿಯುವ, ಬದಲಾಯಿಸುವ ಅಧಿಕಾರವನ್ನು ಬ್ಯಾಂಕು ಹೊಂದಿರುತ್ತದೆ.

6) ಆಯ್ಕೆಗೊಂಡ ಅಭ್ಯರ್ಥಿಗಳು ಎರಡು ವರ್ಷ ಅವಧಿಯ ಪರೀಕ್ಷಾರ್ಹ ಸೇವೆಯಲ್ಲಿರಬೇಕಾಗುತ್ತದೆ. ಆಯ್ಕೆಗೊಂಡ ಅಭ್ಯರ್ಥಿಗಳು ಬ್ಯಾಂಕಿನಿಂದ ಸೂಚಿಸಲ್ಪಟ್ಟಂತೆ ಠೇವಣಿ ಹಾಗೂ ವೈಯಕ್ತಿಕ ಭದ್ರತೆ ನೀಡಬೇಕಾಗುತ್ತದೆ.

7) ಅಭ್ಯರ್ಥಿಗಳಿಗೆ ಕನ್ನಡ ಭಾಷೆ ಜ್ಞಾನ ಅಪೇಕ್ಷಣೀಯ.

8) ಸರ್ಕಾರಿ / ಅರೆ ಸರ್ಕಾರಿ / ರಾಜ್ಯ / ಕೇಂದ್ರ ಸರ್ಕಾರದ ಸೇವೆಯಲ್ಲಿರುವ ಅಭ್ಯರ್ಥಿಗಳು ಕೊನೆಯ ದಿನಾಂಕದೊಳಗೆ ಸೇವೆ ಸಲ್ಲಿಸುತ್ತಿರುವ ಸಂಸ್ಥೆಯಿಂದ ಸಹಿ ಹಾಗೂ ಮೊಹರುನೊಂದಿಗೆ ಪಡೆಯಲಾದ ನಿರಾಕ್ಷೇಪಣ ಪ್ರಮಾಣ ಪತ್ರ. ಸಲ್ಲಿಸುವುದು. (ಕ್ರೂಢೀಕೃತ/ ಆನ್-ಲೈನ್ ಮುಖಾಂತರ ಪಡೆದಿರುವ ನಿರಾಕ್ಷೇಪಣ ಪ್ರಮಾಣ ಪತ್ರಗಳು ಇದ್ದಲ್ಲಿ ಅಂತಹ ನಿರಾಕ್ಷೇಪಣ ಪತ್ರಗಳನ್ನು ನೇಮಕಾತಿ ಪ್ರಾಧಿಕಾರದಿಂದ ದೃಢೀಕರಿಸಿರಬೇಕು/ Attested).

ಮೇಲ್ಕಂಡ ಸೂಚನೆಗಳನ್ನು ಪಾಲಿಸದೇ ಇರುವ ಅಭ್ಯರ್ಥಿಗಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

## 7. ವಿಶೇಷ ಸೂಚನೆಗಳು:

**ONLINE** ಮೂಲಕ ಅರ್ಜಿ ಸಲ್ಲಿಸುವಾಗ ಎಲ್ಲಾ ಮಾಹಿತಿಗಳನ್ನು ಸರಿಯಾಗಿ ಭರ್ತಿ ಮಾಡಿರುವ ಬಗ್ಗೆ ಖಚಿತಪಡಿಸಿಕೊಂಡು ನಂತರ ಅದರ ಒಂದು ಪ್ರತಿಯನ್ನು ಡೌನ್‌ಲೋಡ್ ಮಾಡಿಕೊಂಡು ನೇಮಕಾತಿ ಪ್ರಕ್ರಿಯೆ ಮುಗಿಯುವವರೆಗೂ ಭದ್ರವಾಗಿ ತೆಗೆದಿಟ್ಟುಕೊಂಡಿರತಕ್ಕದ್ದು.

ಈಗಾಗಲೇ ಸೇವೆಯಲ್ಲಿರುವ / ಸೇವೆ ಸಲ್ಲಿಸಿದ ಅಭ್ಯರ್ಥಿಗಳು ಅವರುಗಳ ನೇಮಕಾತಿ ಪ್ರಾಧಿಕಾರಿಗಳಿಂದ ಅರ್ಜಿ ಸಲ್ಲಿಸಲು ನಿಗಧಿಪಡಿಸಿದ ಕೊನೆಯ ದಿನಾಂಕದೊಳಗೆ ಅನುಮತಿಯನ್ನು ಪಡೆದಿಟ್ಟುಕೊಂಡಿರತಕ್ಕದ್ದು ಹಾಗೂ ವಿವರಗಳನ್ನು ಅರ್ಜಿಯಲ್ಲಿ ನಮೂದಿಸತಕ್ಕದ್ದು ಮತ್ತು ಇದೇ ಪ್ರಮಾಣ ಪತ್ರದ ಮೂಲ ಪ್ರತಿಯನ್ನು ಸಂದರ್ಶನದ ಮೂಲ ದಾಖಲಾತಿಯ ಪರಿಶೀಲನೆಯ ಸಮಯದಲ್ಲಿ ಹಾಜರು ಪಡಿಸತಕ್ಕದ್ದು. ತಪ್ಪಿದ್ದಲ್ಲಿ, ಅನರ್ಹಗೊಳಸಲಾಗುವುದು.

ಅರ್ಜಿಗಳನ್ನು ಭರ್ತಿ ಮಾಡಲು ಕೊನೆಯ ದಿನಾಂಕವು ಸಾರ್ವತ್ರಿಕ ರಜಾ ದಿನವಾಗಿ ಘೋಷಿಸಲ್ಪಟ್ಟರೆ ಆ ದಿನಾಂಕದ ನಂತರದ ಕೆಲಸದ ದಿನವು ಅರ್ಜಿಗಳನ್ನು ಭರ್ತಿ ಮಾಡಲು ಕೊನೆಯ ದಿನಾಂಕವಾಗುವುದು.

ಆಯಾ ಹುದ್ದೆಗಳಿಗೆ ನಿಗಧಿಪಡಿಸಿದ ಲಿಖಿತ ಪರೀಕ್ಷೆ ದಿನಾಂಕ ಹಾಗೂ ಪ್ರವೇಶ ಪತ್ರ **(Hall Ticket)** ಮತ್ತು ಸಂದರ್ಶನದ ದಿನಾಂಕಗಳನ್ನು ಬ್ಯಾಂಕಿನ ಜಾಲ ತಾಣ **(Website)** ದಲ್ಲಿ ಬಿತ್ತರಿಸಲಾಗುವುದು. ಜಾಲ ತಾಣದಲ್ಲಿ **(Website)** ಬಿತ್ತರಿಸಿರುವ ಬಗ್ಗೆ ದಿನಪತ್ರಿಕೆಗಳಲ್ಲಿ ಪತ್ರಿಕಾ ಪ್ರಕಟಣೆ ನೀಡಲಾಗುವುದು. ಅಭ್ಯರ್ಥಿಗಳು ಜಾಲ ತಾಣದಲ್ಲಿ ತಿಳಿಸಿರುವ ಸೂಚನೆಗಳನ್ನು ಅನುಸರಿಸಿ, ಪ್ರವೇಶ ಪತ್ರ **(Hall Ticket)** ಪಡೆದು ಲಿಖಿತ ಪರೀಕ್ಷೆ ಹಾಗೂ ಸಂದರ್ಶನಕ್ಕೆ ಹಾಜರಾಗತಕ್ಕದ್ದು. ಅಭ್ಯರ್ಥಿಗಳು ಅರ್ಜಿಯಲ್ಲಿ ನೀಡುವ ವಿಳಾಸವೇ ಅಂತಿಮವಾಗಿದ್ದು, ಎಲ್ಲಾ ಪತ್ರ ವ್ಯವಹಾರಗಳನ್ನು ಅದೇ ವಿಳಾಸಕ್ಕೆ ಕಳುಹಿಸಿ ಕೊಡಲಾಗುವುದು, ನಂತರದಲ್ಲಿ ವಿಳಾಸ ಬದಲಾವಣೆ ಬಗ್ಗೆ ವ್ಯವಹಾರವನ್ನು ಪರಿಗಣಿಸಲಾಗುವುದಿಲ್ಲ.

**"ಅರ್ಜಿ ಸಲ್ಲಿಸಿ ಶುಲ್ಕ ಪಾವತಿಸಿರುವ ಅಭ್ಯರ್ಥಿಗಳಲ್ಲಿ ಯಾರಿಗಾದರೂ ಮರು ನೇಮಕಾತಿ ಪ್ರಕಟಣೆ ಹೊರಡಿಸಿರುವ ಅವಧಿ ಮುಕ್ತಾಯಗೊಳ್ಳುವ ದಿನಾಂಕಕ್ಕೆ ವಯೋಮಿತಿ ಮೀರುವಂತಹ ಸಂದರ್ಭದಲ್ಲಿ ವಯೋಮಿತಿ ಸಡಿಲಿಕೆಗೆ ಅವಕಾಶ ಮಾಡಲಾಗುವುದು."**

## ೮. ದುರ್ನಡತೆ:

ಒಬ್ಬ ಅಭ್ಯರ್ಥಿಯು ನಕಲಿ ವ್ಯಕ್ತಿಯಾಗಿರುವನೆಂದು ಅಥವಾ ಖೋಟಾ ದಸ್ತಾವೇಜು ಅಥವಾ ತಿದ್ದಲಾದ ದಸ್ತಾವೇಜುಗಳನ್ನು ಸಲ್ಲಿಸಿರುವನೆಂದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವನೆಂದು ಅಥವಾ ವಾಸ್ತವಿಕ ಮಾಹಿತಿಯನ್ನು ಮರೆಮಾಚಿರುವನೆಂದು ಅಥವಾ ನೇಮಕಾತಿ ಉದ್ದೇಶಗಳಿಗಾಗಿ ನಡೆಸಲಾದ ಪರೀಕ್ಷೆಯಲ್ಲಿ ಸಂದರ್ಶನದಲ್ಲಿ ಅನುಚಿತ ಮಾರ್ಗವನ್ನು ಅನುಸರಿಸುತ್ತಿರುವನೆಂದು ಅಥವಾ ಅನುಸರಿಸಲು ಪ್ರಯತ್ನಿಸಿರುವನೆಂದು ಅಥವಾ ಅವರ ನೇಮಕಾತಿಯ ಸಂಬಂಧದಲ್ಲಿ ಯಾವುದೇ ಇತರೆ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಬಿಸಿರುವನೆಂದು ಕಂಡುಬಂದಲ್ಲಿ ಅವನು/ಅವಳು ಸ್ವತಃ ಕ್ರಿಮಿನಲ್ ವ್ಯವಹರಣೆಗಳಿಗೆ ಮತ್ತು ಶಿಸ್ತು ಕ್ರಮಕ್ಕೆ ಒಳಪಡುವುದಲ್ಲದೆ, ಹುದ್ದೆಯ ಸಂದರ್ಶನದಿಂದ / ಆಯ್ಕೆಯಿಂದ ಅಭ್ಯರ್ಥಿತ್ವವನ್ನು ರದ್ದುಪಡಿಸಲಾಗುವುದು.

**( ಪುಂಡಲಿಕ ಎಲ್. ಸಾದುರೆ ಕೆ.ಸಿ.ಎಸ್.)**
**ಸದಸ್ಯ ಕಾರ್ಯದರ್ಶಿ ನೇಮಕಾತಿ ಸಮಿತಿ ಹಾಗೂ**
**ಮುಖ್ಯಕಾರ್ಯನಿರ್ವಹಣಾಧಿಕಾರಿ**
**ಬೆಂಗಳೂರು ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್ ನಿ.,**

**<u>ರಾಜ್ಯ ಸರ್ಕಾರಿ / ಕೇಂದ್ರ ಸರ್ಕಾರಿ ನೌಕರರು ಒದಗಿಸಬೇಕಾದ ಪ್ರಮಾಣ ಪತ್ರ</u>**

ಶ್ರೀ / ಶ್ರೀಮತಿ.............................................................................................ರವರು ರಾಜ್ಯ / ಕೇಂದ್ರಸರ್ಕಾರದಲ್ಲಿ........................................................................................................................ (ಪದನಾಮ)........................................................................................................................................ .......................................................ಇಲಾಖೆಯಲ್ಲಿ ಖಾಯಂ / ತಾತ್ಕಾಲಿಕ ಹುದ್ದೆಯನ್ನು ದಿನಾಂಕ...............................ರಿಂದ ...................................ರವರೆಗೆ ಹೊಂದಿರುವವರು. ಈ ಹುದ್ದೆಗೆ ಇವರು ನೇಮಕಾತಿ ನಿಯಮಗಳಡಿ ಆಯ್ಕೆಯಾಗಿದ್ದು, ಸದರಿ ಹುದ್ದೆಗೆ ಅರ್ಜಿ ಸಲ್ಲಿಸಲು ಅವರಿಗೆ ಅನುಮತಿ ನೀಡಲಾಗಿದೆ.

ಸ್ಥಳ: ನೇಮಕಾತಿ ಪ್ರಾಧಿಕಾರದ ಸಹಿ/

ದಿನಾಂಕ : ಇಲಾಖೆಯ ಹೆಸರು ಮತ್ತು ಮೊಹರುನೊಂದಿಗೆ